## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಶ್ರೀ ಎಸ್.ಎಸ್.ಗಂಗಾಧರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಭದ್ರಾವತಿ, ಶಿವಮೊಗ್ಗ ಜಿಲ್ಲೆ ಮತ್ತು ಶ್ರೀ ಎ.ಜಿ. ರಾಜೇಂದ್ರಕುಮಾರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಎಡೇಹಳ್ಳಿ ಗ್ರಾಮ ಪಂಚಾಯತಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪ ಲೋಕಾಯುಕ್ತರು-2,ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರಿಗೆ ವಹಿಸುವ ಬಗ್ಗೆ

ಓದಲಾಗಿದೆ:1. ಮಾನ್ಯ ಉಪ ಲೋಕಾಯುಕ್ತರು-2, ರವರ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿ ಸಲ್ಲಿಸಿರುವ ವರದಿ ದಿ:03-07-2015.
2. ಸಹಾಯಕ ನಿಬಂಧಕರು, ಕಾನೂನು ಸಲಹೆ-1, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೆಂಟ್/ ಉಪಲೋಕ್/ಬಿಡಿ/2180/ 2014/ಎಆರ್‌ಎಲ್‌ಓ-1 ದಿನಾಂಕ:08-07-2015.

-------

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದ ಜೊತೆಗೆ ಸಹಾಯಕ ನಿಬಂಧಕರು, ಕಾನೂನು ಸಲಹೆ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪ ಲೋಕಾಯುಕ್ತ-2 ರವರ ಕಲಂ 12(3) ರ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತ-2 ರವರ ವರದಿಯನ್ವಯ ಕ್ರಮ ಕೈಗೊಂಡು ಕೈಗೊಂಡ ಕ್ರಮದ ಬಗ್ಗೆ ವರದಿ ಸಲ್ಲಿಸಲು ಕೋರಿರುತ್ತಾರೆ.

ಭದ್ರಾವತಿ ತಾಲ್ಲೂಕಿನ ಎಡೆಹಳ್ಳಿ ಗ್ರಾಮದ ಸಂತೇಮೈದಾನಕ್ಕೆಂದು ಕಾದಿರಿಸಿದ ಜಾಗವನ್ನು ಶ್ರೀ ಎಸ್.ಎಸ್. ಗಂಗಾಧರಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ , ತಾಲ್ಲೂಕು ಪಂಚಾಯತಿ ಭದ್ರಾವತಿ ಮತ್ತು ಶ್ರೀ ಎ.ಜಿ. ರಾಜೇಂದ್ರಕುಮಾರ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಡೇಹಳ್ಳಿ ಗ್ರಾಮ ಪಂಚಾಯತಿ, ಭದ್ರಾವತಿ ರವರುಗಳು ಲಯನ್ಸ್ ಕ್ಲಬ್ಬಿಗೆ ನೀಡಿದ್ದು, ಈ ಸಂಬಂಧ ಲೋಕಾಯುಕ್ತಕಚೇರಿಯಲ್ಲಿ ಶ್ರೀ ಜಿ. ಬಸವರಾಜ್ ಬಿನ್ ಜಿ. ಎನ್. ಮಲ್ಲಪ್ಪ ಎಡೇಹಳ್ಳಿ ಅಂಚೆ ಭದ್ರಾವತಿ ತಾಲ್ಲುಕು ಇವರು ದೂರನ್ನು ನೀಡಿದ್ದು, ಸದರಿ ದೂರಿಗೆ ಸಂಬಂಧಿಸಿದಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 9 ರಡಿಯಲ್ಲಿ ತನಿಖೆಗೆ ತೆಗೆದುಕೊಂಡ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಲೋಕಾಯುಕ್ತ ಕಾಯ್ದೆ ಕಲಂ 12(3) ರಡಿ ಸಲ್ಲಿಸಿರುವ ವರದಿಯಲ್ಲಿ ಶ್ರೀ ಎಸ್. ಎಸ್. ಗಂಗಾಧರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಭದ್ರಾವತಿ ಮತ್ತು ಶ್ರೀ ಎ. ಜಿ. ರಾಜೇಂದ್ರಕುಮಾರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಡೇಹಳ್ಳಿ ಗ್ರಾಮ ಪಂಚಾಯಿತಿ, ಭದ್ರಾವತಿ ತಾಲ್ಲೂಕು ರವರುಗಳು ಶಿವಮೊಗ್ಗ ಜಿಲ್ಲಾಧಿಕಾರಿಗಳು ಎಡೇಹಳ್ಳಿ ಗ್ರಾಮದ ಸರ್ವೆ ನಂ. 22 ರಲ್ಲಿ ಒಂದು ಎಕರೆ ಜಾಗವನ್ನು ಸಂತೆ ಮೈದಾನಕ್ಕಾಗಿ ಕಾಯ್ದಿರಿಸಿದ್ದು, ಸದರಿ ಜಮೀನಿನ ಚೆಕ್ ಜಿಲ್ಲಾಧಿಕಾರಿಗಳ ಷರತ್ತನ್ನು ಉಲ್ಲಂಘಿಸಿ 30X 80 ಅಡಿ ಜಾಗವನ್ನು ಎಡೇಹಳ್ಳಿ ಲಯನ್ಸ್ ಕ್ಲಬ್ಬಿಗೆ ಖಾತೆ ಮಾಡಲು ಕ್ರಮವಹಿಸಿ/ಆದೇಶಿಸಿ ಕರ್ತವ್ಯ ಲೋಪ ಎಸಗಿರುವುದು ಮತ್ತು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ನಡತೆ ನಿಯಮಗಳ ನಿಯಮ 3(1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿ ಕರ್ತವ್ಯಲೋಪದ ಆರೋಪಕ್ಕೆ ಸಂಬಂಧಿಸಿದಂತೆ, ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪ ಲೋಕಾಯುಕ್ತರ ವರದಿ, ಹಾಗೂ ಲಗತ್ತಿಸಿರುವ ಇತರೆ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಎಸ್.ಎಸ್. ಗಂಗಾಧರಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ , ತಾಲ್ಲೂಕು ಪಂಚಾಯತಿ, ಭದ್ರಾವತಿ ಮತ್ತು ಶ್ರೀ ಎ.ಜಿ. ರಾಜೇಂದ್ರಕುಮಾರ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಡೇಹಳ್ಳಿ ಗ್ರಾಮ ಪಂಚಾಯತಿ, ಭದ್ರಾವತಿ ರವರುಗಳು ಶಿವಮೊಗ್ಗ ಜಿಲ್ಲಾಧಿಕಾರಿಗಳು ಎಡೇಹಳ್ಳಿ ಗ್ರಾಮದ

ಸರ್ವೆ ನಂ. 22 ರಲ್ಲಿ ಒಂದು ಎಕರೆ ಜಾಗವನ್ನು ಸಂತೆ ಮೈದಾನಕ್ಕಾಗಿ ಕಾಯ್ದಿರಿಸಿದ್ದು, ಸದರಿ ಜಮೀನಿನ ಪೈಕಿ ಜಿಲ್ಲಾಧಿಕಾರಿಗಳ ಷರತ್ತನ್ನು ಉಲ್ಲಂಘಿಸಿ 30X 80 ಅಡಿ ಜಾಗವನ್ನು ಎಡೇಹಳ್ಳಿ ಲಯನ್ಸ್ ಕ್ಲಬ್ಬಿಗೆ ಖಾತೆ ಮಾಡಲು ಕ್ರಮವಹಿಸಿ/ಆದೇಶಿಸಿ ಕರ್ತವ್ಯ ಲೋಪ ಎಸಗಿರುವುದು ಮತ್ತು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಟೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿ ಕರ್ತವ್ಯಲೋಪದ ಆರೋಪಕ್ಕೆ ಸಂಬಂಧಿಸಿದಂತೆ, ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಆದ್ದರಿಂದ ಶ್ರೀ ಎಸ್.ಎಸ್. ಗಂಗಾಧರಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಭದ್ರಾವತಿ ಮತ್ತು ಶ್ರೀ ಎ.ಜಿ. ರಾಜೇಂದ್ರಕುಮಾರ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಡೇಹಳ್ಳಿ ಗ್ರಾಮ ಪಂಚಾಯತಿ, ಭದ್ರಾವತಿ ತಾಲ್ಲೂಕು ರವರುಗಳ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಂತೆ ನಡೆಸುವ ಸಲುವಾಗಿ, ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರಂತೆ ಮಾನ್ಯ ಉಪ ಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ವಿಸೇಬಿ 2015 ಬೆಂಗಳೂರು ದಿನಾಂಕ:14-08-2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಸ್.ಎಸ್. ಗಂಗಾಧರಪ್ಪ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಭದ್ರಾವತಿ, ಮತ್ತು ಶ್ರೀ ಎ.ಜಿ. ರಾಜೇಂದ್ರಕುಮಾರ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಎಡೇಹಳ್ಳಿ ಗ್ರಾಮ ಪಂಚಾಯತಿ, ಭದ್ರಾವತಿ ತಾಲ್ಲೂಕು ರವರುಗಳ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಂತೆ ನಡೆಸುವ ಸಲುವಾಗಿ, ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರಂತೆ ಮಾನ್ಯ ಉಪ ಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ ಸಿ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ: 1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸಹಾಯಕ ನಿಬಂಧಕರು, ಕಾನೂನು ಸಲಹೆ-1 ಮಾನ್ಯ ಕರ್ನಾಟಕ ಲೋಕಾಯುಕ್ತ ರವರ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ

**ಪ್ರತಿಗಳು ಮಾಹಿತಿಗಾಗಿ :**

4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.